# ಕರ್ನಾಟಕ ಸರಕಾರದ ನಡುವಳಿಕೆಗಳು

ವಿಷಯ:- ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲೂಕ ಉಡಿಕೇರಿ ಗ್ರಾಮದ ಜಮೀನುಗಳನ್ನು ಬೂದಿಹಾಳ ಏತ ನೀರಾವರಿ ಯೋಜನೆಯ ಬಲದಂಡೆ ಕಾಲುವೆ ಬ್ಲಾಕ್ ನಂ.3ಬಿ ರಸ್ತೆ ನಿರ್ಮಾಣದ ಸಲುವಾಗಿ ಜಮೀನುಗಳನ್ನು ಭೂಸ್ವಾಧೀನಪಡಿಸಿಕೊಳ್ಳುತ್ತಿದ್ದು, ಭೂಸ್ವಾಧೀನ ಕಾಯ್ದೆ 2013ರ ಕಲಂ 16(6)ರ ಅಡಿಯಲ್ಲಿ ಪುನರ್‌ವಸತಿ ಮತ್ತು ಪುನರವ್ಯವಸ್ಥೆಯ ಕರಡು ಯಾದಿಯನ್ನು ಅನುಮೋದಿಸುವ ಕುರಿತು.

ಉಲ್ಲೇಖ:-1} ಭೂಸ್ವಾಧೀನ ಕಾಯ್ದೆ 2013ರ ಕಲಂ 11(1) ಕ್ಕೆ ಅನುಸಾರವಾಗಿ ಹೊರಡಿಸಲಾಗಿರುವ ಅಧಿಸೂಚನೆ ದಿ: 29-10-2015

2}ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನ್ಯಾಯೋಚಿತ ಪರಿಹಾರಕ್ಕೆ ಹಕ್ಕು, ಪುನರ್‌ವಸತಿ ಮತ್ತು ಪುನರ್ ವ್ಯವಸ್ಥೆ ಅಧಿನಿಯಮ, 2013ರ ಕಲಂ 16(6)ರ ಕುರಿತು.

3} ಈ ಕಾರ್ಯಾಲಯದ ಅವಧಿ ವಿಸ್ತರಣೆ ಪತ್ರ ಕ್ರ. ಸಂ.4686 ದಿನಾಂಕ 4-1-2017

4} ವಿಶೇಷ ಜಿಲ್ಲಾಧಿಕಾರಿಗಳು, ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್‌ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿ ಇವರ ಕಲಂ 17(2)ರಡಿ ಶಿಫಾರಸ್ಸು ದಿನಾಂಕ: 22-10-2016. ಅವಧಿ ವಿಸ್ತರಣೆ ನಂತರ 5-1-2017ರಂದು ಪುನ: ಸಲ್ಲಿಸಲಾಗಿದೆ.

-ooo-

ಸಂ: ಆಯುಕ್ತರು/ಭೂಸ್ವಾ/ಸಿ.ಆರ್- /2016-17/530 ದಿನಾಂಕ: 19-1-2017.

ವಿಶೇಷ ಜಿಲ್ಲಾಧಿಕಾರಿಗಳು, ಭೂಸ್ವಾಧೀನ ಪುನರ್ವಸತಿ ಪುನರ್‌ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿರವರಿಂದ ಬಂದಿರುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಸಾರ್ವಜನಿಕ ಉದ್ದೇಶಕ್ಕಾಗಿ **ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲೂಕ ಉಡಿಕೇರಿ ಗ್ರಾಮದ ಜಮೀನುಗಳನ್ನು ಬೂದಿಹಾಳ ಏತ ನೀರಾವರಿ ಯೋಜನೆಯ ಬಲದಂಡೆ ಕಾಲುವೆ ಬ್ಲಾಕ್ ನಂ.3ಬಿ ರಸ್ತೆ ನಿರ್ಮಾಣದ ಸಲುವಾಗಿ ಜಮೀನುಗಳನ್ನು** ಸ್ವಾಧೀನ ಪಡಿಸುತ್ತಿರುವ ಪ್ರಕರಣಗಳಿಗೆ ಒಟ್ಟು ೦೦ಎ-25ಗುಂ ಕ್ಷೇತ್ರದ ನೂತನ ಕಾಯ್ದೆಯ ಕಲಂ 16(2) ನೇದ್ದರ ಮೇರೆಗೆ ಗಣತಿ ಕಾರ್ಯವನ್ನು ಕೈಗೊಂಡು ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಯೋಜನೆಯ ಯಾದಿಯನ್ನು ತಯಾರಿಸಿದ್ದಾರೆ.

ವಿಶೇಷ ಭೂಸ್ವಾಧೀನಾಧಿಕಾರಿಗಳು, 3ನೇ ಮಲಪ್ರಭಾ ಯೋಜನೆ, ಬಾಗಲಕೋಟ ಇವರನ್ನು ಈ ಯೋಜನೆಗೆ ಕಾರ್ಯವನ್ನು ನಿರ್ವಹಿಸಲು ನೇಮಿಸಲಾಗಿದೆ ಮತ್ತು ಸ್ವತ್ತುಗಳನ್ನು ಭೂಸ್ವಾಧೀನಪಡಿಸಿಕೊಳ್ಳಲು ಆದೇಶಿಸುವ ಅಧಿಕಾರವನ್ನು ನೀಡಲಾಗಿದೆ.

ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನ್ಯಾಯೋಚಿತ ಪರಿಹಾರಕ್ಕೆ ಹಕ್ಕು, ಪುನರ್‌ವಸತಿ ಮತ್ತು ಪುನರ್ ವ್ಯವಸ್ಥೆ ಅಧಿನಿಯಮ, 2013ರ ಕಲಂ 16(6)ರ ಅನುಗುಣವಾಗಿ ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು ಹಾಗೂ ಭೂಸ್ವಾಧೀನ ಕಾಯ್ದೆ 2013ರ ಕಲಂ 45 ರಡಿ ಪ್ರಕರಣದಲ್ಲಿ ಸದರಿ ಭೂಸ್ವಾಧೀನ ಪ್ರಕರಣದಲ್ಲಿ ಒಳಗೊಂಡ ಕ್ಷೇತ್ರವು 100 ಎಕರೆಗಿಂತ ಕಡಿಮೆ ಇರುವುದರಿಂದ ಅನ್ವಯಿಸುವುದಿಲ್ಲ.

ನೂತನ ಭೂಸ್ವಾಧೀನ ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಕಾಯ್ದೆ 2013ರ ಕಲಂ 16(3)ರಡಿ ತಯಾರಿಸಲಾದ ಗಣತಿ ಯಾದಿಯಲ್ಲಿ ಒಟ್ಟು ಕ್ಷೇತ್ರ ೦೦ಎ-**25ಗುಂ** ಕ್ಷೇತ್ರದಲ್ಲಿ ಜಮೀನು ಸ್ವಾಧೀನಕ್ಕೆ ಒಳಪಡುತ್ತಿದ್ದು, ಈ ಪೈಕಿ ಒಟ್ಟು 01 ಕುಟುಂಬವು ಬಾಧಿತಗೊಳ್ಳುತ್ತಿರುವುದರಿಂದ ನೂತನ ಭೂಸ್ವಾಧೀನ ಕಾಯ್ದೆರಂತೆ ಪುನರ್ವಸತಿ ಪುನರ್‌ನಿರ್ಮಾಣದ ಕ್ರಿಯಾ ಯೋಜನೆಯನ್ನು ತಯಾರಿಸಿರುತ್ತಾರೆ. ಈ ಕುಟುಂಬವು ಜೀವನೋಪಾಯಕ್ಕೆ ನಷ್ಟ ಹೊಂದುವುದಿಲ್ಲ ಎಂಬುವುದನ್ನು ವಿಶೇಷ ಜಿಲ್ಲಾಧಿಕಾರಿಗಳು, ಭೂಸ್ವಾಧೀನ ಪುನರ್ವಸತಿ ಪುನರ್‌ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿರವರು ಕೂಲಂಕುಷವಾಗಿ ಪರಿಶೀಲಿಸಿ

ನೂತನ ಕಾಯ್ದೆರಡಿ ಕಲಂ 16(6)ರಡಿ ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆಯ ಕರಡು ಯಾದಿಯನ್ನು ತಯಾರಿಸಿ ಕಲಂ 18 ರಡಿ ಅನುಮೋದನೆಗಾಗಿ ಶಿಫಾರಸ್ಸು ಮಾಡಿದ್ದಾರೆ.

ವಿಶೇಷ ಜಿಲ್ಲಾಧಿಕಾರಿಗಳು, ಭೂಸ್ವಾಧೀನ ಪುನರ್ವಸತಿ ಪುನರ್‌ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿರವರು ಶಿಫಾರಸ್ಸು ಮಾಡಿರುವ ಯಾದಿಯನ್ನು ಆಧರಿಸಿ, ನೂತನ ಭೂಸ್ವಾಧೀನ ಕಾಯ್ದೆ 2013ರ ಕಲಂ 84 ರನ್ವಯ ಸೌಲಭ್ಯ ಪಡೆಯುವ ಕುಟುಂಬವು ಸುಳ್ಳು ಮಾಹಿತಿ ನೀಡಿದಲ್ಲಿ ಕಲಂ 84 (1) (2) ಹಾಗೂ (3) ರನ್ವಯ ಶಿಕ್ಷೆಗೆ ಗುರಿಪಡಿಸಲಾಗುವುದೆಂಬ ಷರತ್ತಿಗೆ ಒಳಪಟ್ಟು ಪುನರ್‌ವ್ಯವಸ್ಥೆ ಯೋಜನೆಯ ಪ್ರಸ್ತಾವನೆಯನ್ನು ನೂತನ ಕಾಯ್ದೆ ಕಲಂ 18ರಡಿ ಅನುಮೋದಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

19/4/17
ಆಯುಕ್ತರು,
ಪುಪು ಮತ್ತು ಭೂಸ್ವಾಧೀನ, ಕೃಮೇಯೋ,
ಹಾಗೂ ಪದನಿಮಿತ್ತ ಸರಕಾರದ ಕಾರ್ಯದರ್ಶಿಗಳು,
ಕರ್ನಾಟಕ ಸರಕಾರ, ಕಂದಾಯ ಇಲಾಖೆ
ನವನಗರ, ಬಾಗಲಕೋಟ

**ಇವರಿಗೆ:**

1) ಜಿಲ್ಲಾಧಿಕಾರಿಗಳು ಬೆಳಗಾವಿ ಜಿಲ್ಲೆ ಇವರಿಗೆ ಮಾಹಿತಿ ಕುರಿತು ಕಳುಹಿಸಿದೆ.
2) ವಿಶೇಷ ಜಿಲ್ಲಾಧಿಕಾರಿಗಳು, ಭೂಸ್ವಾಧೀನ ಪುನರ್ವಸತಿ ಪುನರ್‌ನಿರ್ಮಾಣ, ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿರರಿಗೆ ಮಾಹಿತಿ ಕುರಿತು ಕಳುಹಿಸಿದೆ.
3) ವಿಶೇಷ ಭೂಸ್ವಾಧೀನಾಧಿಕಾರಿಗಳು, 3ನೇ ಮಲಪ್ರಭಾ ಯೋಜನೆ, ಬಾಗಲಕೋಟ ಇವರಿಗೆ ಅನುಮೋದಿತ ಪ್ರಸ್ತಾವನೆಯೊಂದಿಗೆ ಸೂಕ್ತ ಕ್ರಮಕ್ಕಾಗಿ
4) ಉಪ ವಿಭಾಗಾಧಿಕಾರಿಗಳು, ಬೆಳಗಾವಿ ಇವರಿಗೆ ಮಾಹಿತಿಗಾಗಿ.
5) ತಹಶೀಲ್ದಾರರು, ಬೈಲಹೊಂಗಲ ಇವರ ಮಾಹಿತಿಗಾಗಿ.
6) ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಉಡಿಕೇರಿ ತಾಲೂಕ ಬೈಲಹೊಂಗಲ ಇವರಿಗೆ.
7) Web site: www.bagalkot.nic.in/ukp. ಅಂತರಜಾಲದಲ್ಲಿ ಅಳವಡಿಸಲು ಸಿಸ್ಟಂ ಮ್ಯಾನೇಜರ್, ಕಂಪ್ಯೂಟರ್ ವಿಭಾಗ, ಪು ಮತ್ತು ಪು, ಕೃಮೇಯೋ, ನವನಗರ, ಬಾಗಲಕೋಟ ಇವರಿಗೆ.
8) ಭೂಸ್ವಾಧೀನ ವಿಭಾಗಕ್ಕೆ.